# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 334 (416) |
| 2 | ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | : | 10.07.2023 |
| 4 | ಉತ್ತರಿಸುವ ಸಚಿವರು | : | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*******

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜ್ ತೆರೆಯುವುದಾಗಿ ಘೋಷಣೆ ಮಾಡಿದ್ದು, ಅದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ಮಾಹಿತಿ ನೀಡುವುದು) | ಕೇಂದ್ರದ ನೀತಿ ಆಯೋಗದ ಅನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಿದ್ದು, ಕೇಂದ್ರ ಸರ್ಕಾರದಿಂದಲೇ ವೈದ್ಯಕೀಯ ಕಾಲೇಜು ತೆರೆಯವ ಬಗ್ಗೆ ಘೋಷಣೆ ಮಾಡಿರುವುದಿಲ್ಲ. |
| ಆ) | ರಾಜ್ಯದಲ್ಲಿ ಇಲ್ಲಿಯವರೆಗೂ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು; ಇವುಗಳು ಯಾವ ವರ್ಷದಲ್ಲಿ ಪ್ರಾರಂಭವಾದವು; (ಸಂಪೂರ್ಣವಾದ ಮಾಹಿತಿ ನೀಡುವುದು.) | ರಾಜ್ಯದಲ್ಲಿ ಇಲ್ಲಿಯವರೆಗೂ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡು **21** ಸರ್ಕಾರಿ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>ಸಂಪೂರ್ಣ ಮಾಹಿತಿಯನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ. |
| ಇ) | ಕೋಲಾರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು; (ಸಂಪೂರ್ಣವಾದ ಮಾಹಿತಿ ನೀಡುವುದು. | ಪ್ರಸ್ತುತದಲ್ಲಿ ಕೋಲಾರ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.<br>ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು. |
| ಈ) | ರಾಜ್ಯ ಸರ್ಕಾರದಿಂದ ವೈದ್ಯಕೀಯ ಕಾಲೇಜ್‌ಗಳಿಗೆ ಪ್ರತಿ ವರ್ಷ ಬಿಡುಗಡೆಯಾಗುವ ಅನುದಾನವೆಷ್ಟು; ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಳಸಬಹುದಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | 2022-23 ನೇ ಸಾಲಿಗೆ ವೈದ್ಯಕೀಯ ಕಾಲೇಜುಗಳಿಗೆ ಒಟ್ಟು ರೂ:268323.36 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.<br>ರೆವಿನ್ಯೂ ಶೀರ್ಷಿಕೆ ಅಡಿಯ ಸಹಾಯಾನುದಾನವನ್ನು ವೇತನ, ಪಿಂಚಣಿ ಶಿಷ್ಯವೇತನ, ವೇತನೇತರ ವೆಚ್ಚಗಳಿಗೆ ಅನುದಾನವನ್ನು ಬಳಸಲಾಗುತ್ತಿದೆ ಹಾಗೂ ಬಂಡಾಳ ಶೀರ್ಷಿಕೆ ಅನುದಾನವನ್ನು ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹಾಗೂ ಕಾಲೇಜುಗಳನ್ನು ಮೇಲ್ದರ್ಜೆಗೆರಿಸಲು ಅನುದಾನವನ್ನು ಬಳಸಲಾಗುತ್ತಿದೆ. |
| ಉ) | ವೈದ್ಯಕೀಯ ಕಾಲೇಜ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳು ದೊರೆಯುತ್ತಿವೆ; ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಯಾವುದಾದರೂ ಹೊಸ ಯೋಜನೆಯನ್ನು ಸರ್ಕಾರ ರೂಪಿಸಲು ಚಿಂತಿಸಿದೆಯೇ?<br>(ಸಂಪೂರ್ಣವಾದ ಮಾಹಿತಿ ನೀಡುವುದು) | ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ digital Library ಮತ್ತು audio visual aids ಸೌಲಭ್ಯಗಳನ್ನು ನೀಡಲಾಗಿದೆ.<br>ಇತರೆ ಹಿಂದುಳಿದ ವರ್ಗಡದ ವಿದ್ಯಾರ್ಥಿಗಳಿಗೆ Scholarshipನ್ನು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ Laptop, B.P Apparatus, Stethoscope, Study Lamp, EBL Charges, Medical and references books ಗಳ ಸೌಲಭ್ಯಗಳನ್ನು ಒದಗಿಸಲಾಗಿದೆ. |

**ಸಂಖ್ಯೆ:ಎಂಇಡಿ 324 ಎಂಎಂಸಿ 2023**

**(ಡಾ. ಶರಣಪ್ರಕಾಶ್ ಆರ್ ಪಾಟೀಲ್ )**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

# ಅನುಬಂಧ-1

| ಕ್ರಸಂ | ಕಾಲೇಜು / ಸಂಸ್ಥೆಯ ಹೆಸರು | ಪ್ರಾರಂಭವಾದ ವರ್ಷ |
|---|---|---|
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ | 1955 |
| 2 | ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ | 1924 |
| 3 | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ | 1957 |
| 4 | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ | 1962 |
| 5 | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ,ಬೀದರ್ | 2007 |
| 6 | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | 2007–08 |
| 7 | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 2005 |
| 8 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 2007 |
| 9 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | 2005–06 |
| 10 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 2006 |
| 11 | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 2014–15 |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ, ಕೊಡಗು | 2014 |
| 13 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ | 2013–14 |
| 14 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | 2015 |
| 15 | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ | 2014–15 |
| 16 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ. | 2016 |
| 17 | ಶ್ರೀ ಅಟಲ್ ಬಿಹಾರಿ ವಾಜಪೇಯಿ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ | 2019–20 |
| 18 | ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಬಳ್ಳಾಪುರ. | 2021–22 |
| 19 | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ. | 2022–23 |
| 20 | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ. | 2022–23 |
| 21 | ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ | 2022–23 |